# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಬಾವಸಾಬ್ ಡಿ.ಎಫ್. ಹಿಂದಿನ ಉಪಾಧ್ಯಕ್ಷರು, ಹಾಲಿ ಸದಸ್ಯರು, ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಉಪ ಲೋಕಾಯುಕ್ತ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ-1703/2013/ಡಿಆರ್‌ಇ-5, ದಿನಾಂಕ:15.10.2015
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ಜಿಲ್ಲೆ, ರವರ ಪತ್ರ ಸಂಖ್ಯೆ:ಜಿಪಂಬ/ಸಿ4/ಸಿಸಿಎ/18/2014-15/0907 ದಿನಾಂಕ:16.01.2016.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ:547:ಗ್ರಾಪಂಕಾ:2015, ದಿನಾಂಕ:12.04.2016 ರ ಕಾರಣ ಕೇಳುವ ನೋಟಿಸ್ಸು.
4. ಶ್ರೀ ಬಾವಸಾಬ್ ಡಿ.ಎಫ್. ಹಿಂದಿನ ಉಪಾಧ್ಯಕ್ಷರು(ಹಾಲಿ ಸದಸ್ಯರು), ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರು ಕಾರಣ ಕೇಳುವ ನೋಟಿಸ್‌ಗೆ ವಕೀಲರ ಮೂಲಕ ನೀಡಿರುವ ಲಿಖಿತ ಹೇಳಿಕೆ ದಿನಾಂಕ:12.05.2016.
5. ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ಸಂಖ್ಯೆ: 24.10.2016

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಉಪಲೋಕಾಯುಕ್ತರು ದಿನಾಂಕ:15.10.2015 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(3) ರನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕು, ದೌವಲತಪುರ ಗ್ರಾಮದ ಶ್ರೀ ಶ್ರೀಪಾದ ಸ್ವಾಮಿ ವಿ.ಜಿ ಬಿನ್ ವಿರಕ್ತಯ್ಯ ಸ್ವಾಮಿ, ಇವರು ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕು, ಕೃಷ್ಣನಗರ ಗ್ರಾಮ ಪಂಚಾಯಿತಿಯ ಹಿಂದಿನ ಉಪಾಧ್ಯಕ್ಷರಾಗಿದ್ದ ಶ್ರೀ ಬಾವಸಾಬ್ ಡಿ.ಎಫ್. ಇವರ ವಿರುದ್ಧ ದೂರು ಸಲ್ಲಿಸಿ ಸದರಿಯವರು ಕೃಷ್ಣನಗರ ಗ್ರಾಮದ 65.75 ಎಕರೆ ವಿಸ್ತೀರ್ಣದ ಸರ್ವೇ ನಂ.249 ರಲ್ಲಿನ ಡಿ.ಸಿ.ಬಿ.ಯಲ್ಲಿ ಅವರ ತಾಯಿ ಶ್ರೀಮತಿ ಫಾತಿಮ ಬಿ. ಇವರ ಹೆಸರನ್ನು ಸೇರಿಸಿ ನಂತರ ಅವರ ಮಗ ಶ್ರೀ ಸುಭಾನ್ ಎನ್ನುವವರ ಹೆಸರಿಗೆ ಗಿಫ್ಟ್ ಡೀಡ್ ಮಾಡಿಸಿ ತಮ್ಮ ಅಧಿಕಾರ ದುರುಪಯೋಗ ಪಡಿಸಿಕೊಂಡು ಸರ್ಕಾರಕ್ಕೆ ಮೋಸ ಮಾಡಿರುತ್ತಾರೆಂದು ಆಪಾದಿಸಿದ್ದು ಅದರಂತೆ ಲೋಕಾಯುಕ್ತ ಸಂಸ್ಥೆಯು ನಡೆಸಿದ ತನಿಖೆಯಿಂದ ಈ ಪ್ರಕರಣದಲ್ಲಿ ಸದರಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿ ಶ್ರೀ ರುದ್ರಪ್ಪ, ಅಂದಿನ ಅಧ್ಯಕ್ಷರಾದ ಶ್ರೀಮತಿ ಹುಸೇನ್ ಬಿ. ಮತ್ತು ಅಂದಿನ ಉಪಾಧ್ಯಕ್ಷರಾದ ಶ್ರೀ ಬಾವಸಾಬ್ ಡಿ.ಎಫ್. ಇವರುಗಳ ವಿರುದ್ಧ ಕೆಳಕಂಡ ಅಂಶಗಳು ಕಂಡು ಬಂದಿವೆ ಎಂದು ತಿಳಿಸಿರುತ್ತಾರೆ.

ಸದರಿ ಗ್ರಾಮ ಪಂಚಾಯತಿಯ ಕಾರ್ಯದರ್ಶಿ ಶ್ರೀ ರುದ್ರಪ್ಪ, ಅಂದಿನ ಅಧ್ಯಕ್ಷರಾದ ಶ್ರೀಮತಿ ಹುಸೇನ್ ಬಿ. ಮತ್ತು ಅಂದಿನ ಉಪಾಧ್ಯಕ್ಷರಾದ ಶ್ರೀ ಬಾವಸಾಬ್ ಡಿ.ಎಫ್. ಇವರುಗಳು ಶಾಮೀಲಾಗಿ ಸರ್ಕಾರದ ಭೂ ಮಂಜೂರಾತಿ ಆದೇಶ ಇಲ್ಲದೆ ಕೃಷ್ಣನಗರ ಗ್ರಾಮದ ಸರ್ವೇ ನಂ.249ರ ಆಸ್ತಿಗೆ ಸಂಬಂಧಿಸಿದಂತೆ ಅಸೆಸ್‌ಮೆಂಟ್ ರಿಜಿಸ್ಟರ್‌ನ ಕ್ರಮ ಸಂಖ್ಯೆ:355 ಮತ್ತು 358 ರಲ್ಲಿ ಕ್ರಮವಾಗಿ ಶ್ರೀಮತಿ ಫಕ್ರುಮಾಬಿ, ಗಂಡ ದೊಡ್ಡ ಫಕ್ರುಸಾಬ್ ಮತ್ತು ಶ್ರೀಮತಿ ಕೆ.ಶೇಖುನ್‌ಬಿ, ಗಂಡ ಇಮಾಮ್‌ಸಾಬ್, ಇವರ ಹೆಸರುಗಳನ್ನು ಸೇರಿಸಿ ಪಂಚಾಯತಿಯ ಅಸೆಸ್‌ಮೆಂಟ್ ರಿಜಿಸ್ಟರ್‌ನಲ್ಲಿ ಅಕ್ರಮ ದಾಖಲೆ ಸೇರಿಸಲು ಹಾಗೂ ಸುಳ್ಳು ದಾಖಲೆಗಳನ್ನು ಸೃಷ್ಟಿಸಲು ಕಾರಣ ಕರ್ತರಾಗಿರುತ್ತಾರೆಂದು, ಸದರಿಯವರುಗಳು ಸರ್ವೇ ನಂ.249ರ 65.75 ಎಕರೆ ವಿಸ್ತೀರ್ಣದ ಸರ್ಕಾರಿ ಜಮೀನನ್ನು ಅಕ್ರಮವಾಗಿ ಮಾರಾಟ ಮಾಡಲು ಅವಕಾಶ ನೀಡಿ ಸದರಿ ಅಕ್ರಮ ಕಾರ್ಯಕ್ಕೆ ಕಾರಣಕರ್ತರಾಗಿದ್ದು ಕರ್ತವ್ಯ ಲೋಪವೆಸಗಿರುವುದಾಗಿ ಹಾಗೂ ಸದರಿಯವರುಗಳು ಚರಂಡಿಯ ಮೇಲೆ ಒತ್ತುವರಿ ಮಾಡಿರುವುದರ ವಿರುದ್ಧ ಕ್ರಮ ತೆಗೆದುಕೊಳ್ಳಲು ವಿಫಲರಾಗಿ ದುರ್ನಡತೆ ಎಸಗಿರುತ್ತಾರೆಂದು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಕ್ರಮವಹಿಸಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕು, ಕೃಷ್ಣನಗರ ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಹುಸೇನ್‌ಬಿ ಮತ್ತು ಹಿಂದಿನ ಉಪಾಧ್ಯಕ್ಷರಾದ ಶ್ರೀ ಬಾವಸಾಬ್ ಡಿ.ಎಫ್. ಇವರುಗಳ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿ ಕ್ರಮಕೈಗೊಳ್ಳುವುದು. ಹಾಗೂ ಶ್ರೀ ರುದ್ರಪ್ಪ, ಅಂದಿನ ಗ್ರಾಮ ಪಂಚಾಯತಿಯ ಕಾರ್ಯದರ್ಶಿ, ಕೃಷ್ಣನಗರ ಗ್ರಾಮ ಪಂಚಾಯತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ರ ನಿಯಮ 3 (i) (ii) ಮತ್ತು (iii) ರಲ್ಲಿ ಹೇಳಿದಂತೆ ದುರ್ನಡತೆ /ದುವರ್ತನೆಯಿಂದ ವರ್ತಿಸಿ ಶಿಸ್ತು ಕ್ರಮಕ್ಕೆ ಭಾಧ್ಯರಾಗಿರುವುದು ಕಂಡು ಬಂದದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರಡಿಯಲ್ಲಿ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಅದರಂತೆ ಸರ್ಕಾರವು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರಿಗೆ ಈ ಕೆಳಕಂಡಂತೆ ಕ್ರಮವಹಿಸುವಂತೆ ಸೂಚಿಸಿದೆ.

ಬಳ್ಳಾರಿ ಜಿಲ್ಲೆ, ಸಂಡೂರು ತಾಲ್ಲೂಕು, ಕೃಷ್ಣನಗರ ಗ್ರಾಮ ಪಂಚಾಯಿತಿಯ ಹಿಂದಿನ ಅಧ್ಯಕ್ಷರಾದ ಶ್ರೀಮತಿ ಹುಸೇನ್ ಬಿ ಮತ್ತು ಹಿಂದಿನ ಉಪಾಧ್ಯಕ್ಷರಾಗಿದ್ದ ಶ್ರೀ ಬಾವಸಾಬ್ ಡಿ.ಎಫ್. ರವರು 2010ನೇ ಸಾಲಿನಲ್ಲಿ ಗ್ರಾಮ ಪಂಚಾಯತಿ ಸದಸ್ಯರಾಗಿ ಆಯ್ಕೆ ಹೊಂದಿದ್ದು ಅವರ ಅವಧಿ ಮೇ-2015 ಕ್ಕೆ ಮುಕ್ತಾಯವಾಗಿರುತ್ತದೆ. ಪ್ರಸ್ತುತ ಅವರು ಗ್ರಾಮ ಪಂಚಾಯತಿ ಸದಸ್ಯರಾಗಿ 2015ನೇ ಸಾಲಿನಲ್ಲಿ ನಡೆದ ಚುನಾವಣೆಯಲ್ಲಿ ಮರು ಆಯ್ಕೆ ಹೊಂದಿದ್ದಲ್ಲಿ ಅವರನ್ನು ಸದಸ್ಯತ್ವದಿಂದ ತೆಗೆದು ಹಾಕಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ಕಾಯ್ದೆ ಪ್ರಕರಣ 43(ಎ) ಅನುಸಾರ ಕ್ರಮವಹಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಹಾಗೂ ಅವರುಗಳು ಸರ್ಕಾರದ ಆಸ್ತಿಗೆ ಸಂಬಂಧಿಸಿದಂತೆ ಸುಳ್ಳು ದಾಖಲೆ ಸೃಷ್ಟಿಸಿರುವುದರಿಂದ ಕರ್ನಾಟಕ ಪಂಚಾಯತ್ ರಾಜ್ ಕಾಯ್ದೆ ಅಡಿಯಲ್ಲಿ ಹಾಗೂ ಕ್ರಿಮಿನಲ್ ಮೊಕ್ಕದ್ದಮೆ ಹೂಡುವ ಮೂಲಕ ಕ್ರಮವಹಿಸುವಂತೆ ಸೂಚಿಸಲಾಗಿರುತ್ತದೆ.

ಶ್ರೀ ರುದ್ರಪ್ಪ, ಅಂದಿನ ಗ್ರಾಮ ಪಂಚಾಯತಿಯ ಕಾರ್ಯದರ್ಶಿ, ಕೃಷ್ಣನಗರ ಗ್ರಾಮ ಪಂಚಾಯತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಕ್ರಮ ವಹಿಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ಜಿಲ್ಲೆ, ರವರು ತಮ್ಮ ವರದಿಯಲ್ಲಿ, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಸಂಡೂರು ರವರು ಸಲ್ಲಿಸಿರುವ ವರದಿಯ ಅನುಸಾರ ಶ್ರೀಮತಿ ಹುಸೇನ್ ಬಿ ರವರು 2015ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿಗೆ ಮರು ಆಯ್ಕೆಯಾಗಿರುವುದಿಲ್ಲ ಆದರೆ ಶ್ರೀ ಬಾವಸಾಬ್ ಡಿ.ಎಫ್. ಇವರು ಗ್ರಾಮ ಪಂಚಾಯಿತಿ ಸದಸ್ಯರಾಗಿ ಕೃಷ್ಣಾನಗರ ಗ್ರಾಮ ಪಂಚಾಯಿತಿಗೆ 2015 ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾಗಿ ಮರು ಆಯ್ಕೆಯಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರ ಅಡಿಯಲ್ಲಿ ಕ್ರಮ ವಹಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ ಹಾಗೂ ಸದರಿ ಆರೋಪಿತರ ವಿರುದ್ಧ ಸಂಡೂರು ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ಗುನ್ನೆ ನಂ:0116/2014 ಹೂಡಲಾಗಿರುತ್ತದೆ ಎಂದು ತಿಳಿಸಿರುತ್ತಾರೆ.

ಶ್ರೀ ಬಾವಸಾಬ್ ಡಿ.ಎಫ್. ಗ್ರಾಮ ಪಂಚಾಯಿತಿ ಸದಸ್ಯರು, ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ ರವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್

ಅಧಿನಿಯಮ 1993 ರ ಪ್ರಕರಣ 43(ಎ) ರ ಅಡಿಯಲ್ಲಿ ಕ್ರಮ ವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟಿಸ್ಸನ್ನು ದಿನಾಂಕ:12.04.2016 ರಂದು ಜಾರಿ ಮಾಡಲಾಗಿರುತ್ತದೆ.

ಸದರಿಯವರು ದಿನಾಂಕ:12.05.2016 ರಂದು ತಮ್ಮ ವಕೀಲರ ಮುಖಾಂತರ ಕಾರಣ ಕೇಳುವ ನೋಟಿಸ್ಸಿಗೆ ಉತ್ತರ ಸಲ್ಲಿಸುತ್ತಾ, ತಮ್ಮ ವಿರುದ್ಧದ ಆರೋಪವನ್ನು ಅಲ್ಲಗಳೆದಿರುತ್ತಾರೆ. ಸದರಿ ಸಮಯದಲ್ಲಿ ಗ್ರಾಮ ಪಂಚಾಯಿತಿಯಲ್ಲಿ ಆಡಳಿತಾಧಿಕಾರಿ ನೇಮಕವಾಗಿದ್ದು ತಾವು ಸದಸ್ಯರಾಗಿರುವುದಿಲ್ಲ ಮತ್ತು ದಾಖಲೆಗಳನ್ನು ನಮೂದಿಸುವುದರಲ್ಲಿ ತಮ್ಮ ಪಾತ್ರವಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ವಿಚಾರಣೆಯನ್ನು ದಿನಾಂಕ:28.10.2016 ರಂದು ಅಪರಾಹ್ನ 4:00 ಘಂಟೆಗೆ ನಿಗಧಿಗೊಳಿಸಲಾಗಿದ್ದು, ಸದರಿ ವಿಚಾರಣೆಗೆ ಸದರಿಯವರು ಹಾಜರಾಗಿರುವುದಿಲ್ಲವಾದ್ದರಿಂದ ಪ್ರಕರಣವನ್ನು ಆದೇಶಕ್ಕಾಗಿ ಮುಂದೂಡಲಾಗಿರುತ್ತದೆ.

ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:18.02.2017 ರಂದು ಉಪ ಲೋಕಾಯುಕ್ತರ ವರದಿ, ಮುಖ್ಯಕಾರ್ಯನಿರ್ವಾಹಕ ಅಧಿಕಾರಿಯವರ ವರದಿ ಹಾಗೂ ಸದರಿಯವರು ನೀಡಿರುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ, ಸರ್ಕಾರವು ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ ಶ್ರೀ ಬಾವಸಾಬ್ ಡಿ.ಎಫ್. ರವರು ಪಂಚಾಯತಿಯ ಅಸೆಸ್‌ಮೆಂಟ್ ರಿಜಿಸ್ಟರ್‌ನಲ್ಲಿ ಅಕ್ರಮ ದಾಖಲೆ ಸೇರಿಸಲು ಹಾಗೂ ಸುಳ್ಳು ದಾಖಲೆಗಳನ್ನು ಸೃಷ್ಟಿಸಲು ಕಾರಣ ಕರ್ತರಾಗಿರುವುದನ್ನು ಮನದಟ್ಟುಮಾಡಿಕೊಂಡು, ಸದರಿಯವರು ಕರ್ತವ್ಯ ಲೋಪವೆಸಗಿರುವುದು ಕಂಡು ಬಂದಿರುವುದರಿಂದ ಸರ್ಕಾರವು ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ಗ್ರಾಮ ಪಂಚಾಯಿತಿ ಸದಸ್ಯತ್ವವನ್ನು ರದ್ದುಪಡಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/547/ಗ್ರಾಪಂಕಾ/2016**

**ಬೆಂಗಳೂರು, ದಿನಾಂಕ:-30-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಬಾವಸಾಬ್ ಡಿ.ಎಫ್. ಗ್ರಾಮ ಪಂಚಾಯಿತಿ ಸದಸ್ಯರು, ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರು ಪಂಚಾಯತಿಯ ಅಸೆಸ್‌ಮೆಂಟ್ ರಿಜಿಸ್ಟರ್‌ನಲ್ಲಿ ಅಕ್ರಮ ದಾಖಲೆ ಸೇರಿಸಲು ಹಾಗೂ ಸುಳ್ಳು ದಾಖಲೆಗಳನ್ನು ಸೃಷ್ಟಿಸಲು ಕಾರಣ ಕರ್ತರಾಗಿರಾಗಿರುವುದರಿಂದ ಇವರನ್ನು ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸದಸ್ಯ ಸ್ಥಾನದಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ತೆಗೆದು ಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

(ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಅಪ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಜಿಲ್ಲೆ.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ.

3. ಶ್ರೀ ಬಾವಸಾಬ್ ಡಿ.ಎಫ್. ಗ್ರಾಮ ಪಂಚಾಯಿತಿ ಸದಸ್ಯರು, ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೃಷ್ಣಾನಗರ ಗ್ರಾಮ ಪಂಚಾಯಿತಿ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.